# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಬಸವರಾಜ ವೀರಪ್ಪ ಸೀಗಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ. ಬೇಡ್ಕಣಿ ಗ್ರಾಮ ಪಂಚಾಯತಿ, ಸಿದ್ದಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧ ಮಾನ್ಯ ಉಪಲೋಕಾಯುಕ್ತ ವರದಿಯ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 311 ಗ್ರಾಪಂಕಾ 2011, ದಿನಾಂಕ 15.09.2011
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. ಲೋಕ್/ಇಎನ್‌ಕ್ಯೂ/14-ಎ/285/2011/ಎಆರ್‌ಇ-3, ದಿನಾಂಕ 29.05.2018
3) ಸರ್ಕಾರದ ಸಮಸಂಖ್ಯೆಯ 2ನೇ ಕಾರಣ ಕೇಳಿ ನೋಟೀಸ್, ದಿನಾಂಕ 12.06.2018
4) ಶ್ರೀ ಬಸವರಾಜ ವೀರಪ್ಪ ಸೀಗಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ. ಬೇಡ್ಕಣಿ ಗ್ರಾಮ ಪಂಚಾಯತಿ, ಸಿದ್ದಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ದಿನಾಂಕ 18.07.2018

ಪ್ರಸ್ತಾವನೆ:

1) ಮೇಲೆ ಓದಲಾದ (1) ರಲ್ಲಿ, ಶ್ರೀ ಬಸವರಾಜ ವೀರಪ್ಪ ಸೀಗಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ. ಬೇಡ್ಕಣಿ ಗ್ರಾಮ ಪಂಚಾಯತಿ, ಸಿದ್ದಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರು ಬೇಡ್ಕಣಿ ಗ್ರಾಮ ಪಂಚಾಯತಿಯಲ್ಲಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ದಿನಾಂಕ 30.12.2008 ರಂದು ಮಳಿಗೆ ನಿರ್ಮಾಣದ ಗುತ್ತಿಗೆ ಹಣದ ಚೆಕ್ಕನ್ನು ನೀಡಲು ಶ್ರೀ ಈಶ್ವರ ದೇವ ನಾಯ್ಕ, ಇವರಿಂದ ರೂ.5,000/- ಗಳ ಅಕ್ರಮ ಸಂಭಾವನೆಯನ್ನು ಪಡೆದು ಲೋಕಾಯುಕ್ತ ಟ್ರಾಪ್‌ಗೆ ಒಳಗಾಗಿರುವ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮ 14ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಲಾಗಿದೆ.

2) ಸದರಿ ಪ್ರಕರಣದ ಕುರಿತು ವಿಚಾರಣೆ ನಡೆಸಲು ಅಪರ ನಿಬಂಧಕರು ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ ರವರನ್ನು ನೇಮಿಸಲಾಗಿದ್ದು, ವಿಚಾರಣಾಧಿಕಾರಿಯು ಕೆಳಕಂಡ ಆರೋಪದ ಮೇಲೆ ವಿಚಾರಣೆ ನಡೆಸಿ, ಸದರಿಯವರ ವಿರುದ್ಧ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಶ್ರೀ ಬಸವರಾಜ ವೀರಪ್ಪ ಸೀಗಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬೇಡ್ಕಣಿ ಗ್ರಾಮ ಪಂಚಾಯತಿ, ಸಿದ್ದಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧ ಇವರಿಗೆ ದೊರಕುವ ಪಿಂಚಣಿಯಲ್ಲಿ ಶೇ.50 ರಷ್ಟು ಮೊತ್ತವನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

3) ಮೇಲೆ ಓದಲಾದ (3)ರಲ್ಲಿ ಪ್ರಕರಣದ ಸಂಬಂಧ ಮಾನ್ಯ ಉಪಲೋಕಾಯುಕ್ತರು ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುವ ಹಿನ್ನೆಲೆಯಲ್ಲಿ ಆಕ್ಷೇಪಣೆಗಳನ್ನು ಆಹ್ವಾನಿಸಿ ಸದರಿ ನೌಕರರುಗಳಿಗೆ ಎರಡನೇ ಕಾರಣ ಕೇಳಿ ನೋಟೀಸ್ ನೀಡಲಾಗಿತ್ತು..

4) ಮೇಲೆ ಓದಲಾದ (4)ರಲ್ಲಿ, ಸದರಿ ನೌಕರರು ಸರ್ಕಾರದಿಂದ ಜಾರಿಗೊಳಿಸಲಾದ ಕಾರಣ ಕೇಳಿ ನೋಟಿಸಿಗೆ ಲಿಖಿತ ಹೇಳಿಕೆ ಸಲ್ಲಿಸಿ, ಈ ಪ್ರಕರಣದ ಕ್ರಿಮಿನಲ್ ಕೇಸ್ ವಿಚಾರಣೆ ಬಾಕಿ ಇರುವಾಗಲೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 14ಎ ರನ್ವಯ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿದೆ. ಪ್ರಕರಣದ ಕ್ರಿಮಿನಲ್ ಕೇಸ್‌ನಲ್ಲಿ ಅವರನ್ನು ದೋಷಮುಕ್ತರನ್ನಾಗಿ ಮಾಡಲಾಗಿದ್ದು, ಈ ಅಂಶವನ್ನು ವಿಚಾರಣಾಧಿಕಾರಿ ಪರಿಗಣಿಸಿರುವುದಿಲ್ಲ. ಹಾಗೂ ಸಾಕ್ಷಿಗಳು ಮತ್ತು ಆಪಾದಿತರ ಹೇಳಿಕೆಗಳನ್ನು ವಿಚಾರಣಾ ಸಂದರ್ಭದಲ್ಲಿ ಪರಿಗಣಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ. ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸನ್ನು ಅಲ್ಲಗಳೆದಿದ್ದು, ದಂಡನೆಯನ್ನು ವಿಧಿಸದಂತೆ ಮನವಿ ಮಾಡಿರುತ್ತಾರೆ.

5) ವಿಚಾರಣಾಧಿಕಾರಿಯವರು ಸಾಕ್ಷ್ಯಾಧಾರಗಳು, ಹೇಳಿಕೆಗಳು ಮತ್ತು ದಾಖಲೆಗಳನ್ನು ಪರಿಶೀಲಿಸಿ ಆರೋಪಗಳು ಸಾಬೀತಾಗಿರುವುದಾಗಿರುವ ಹಿನ್ನೆಲೆಯಲ್ಲಿ, ಶ್ರೀ ಬಸವರಾಜ ವೀರಪ್ಪ ಸೀಗಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬೇಡ್ಕಣಿ ಗ್ರಾಮ ಪಂಚಾಯತಿ, ಸಿದ್ದಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧ ಇವರಿಗೆ ದೊರಕುವ ಪಿಂಚಣಿಯಲ್ಲಿ ಶೇ.50 ರಷ್ಟು ಮೊತ್ತವನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

6) ಸರ್ಕಾರವು ಪರಿಶೀಲಿಸಿ, ಸದರಿ ಪ್ರಕರಣದ ಕುರಿತು ಅಪರ ನಿಬಂಧಕರು ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ ರವರು ಇಲಾಖಾ ವಿಚಾರಣೆ ನಡೆಸಿ ವರದಿ ಸಲ್ಲಿಸಿದ್ದು, ಸದರಿ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವುದಕ್ಕೆ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಆರೋಪದ ತೀರ್ವತೆಗೆ ಅನುಗುಣವಾಗಿ ಮಾನ್ಯ ಉಪಲೋಕಾಯುಕ್ತರು ಸದರಿ ನೌಕರರುಗಳಿಗೆ ಮೇಲ್ಕಂಡ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಸದರಿ ನೌಕರರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಉತ್ತರವನ್ನು ಅಂಗೀಕರಿಸಲು ಬರುವುದಿಲ್ಲ. ಮತ್ತು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಒಪ್ಪುವುದು ಸಮಂಜಸವೆಂದು ಕಂಡು ಬರುತ್ತದೆ. ಈ ಹಿನ್ನೆಲೆಯಲ್ಲಿ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಅಂಗೀಕರಿಸಿ, ಶ್ರೀ ಬಸವರಾಜ ವೀರಪ್ಪ ಸೀಗಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬೇಡ್ಕಣಿ ಗ್ರಾಮ ಪಂಚಾಯತಿ, ಸಿದ್ದಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರುಗಳ ವಿರುದ್ಧ ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸಿನನ್ವಯ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 287 ಗ್ರಾಪಂಕಾ 2018, ಬೆಂಗಳೂರು, ದಿನಾಂಕ: 23.11.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಬಸವರಾಜ ವೀರಪ್ಪ ಸೀಗಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ. ಬೇಡ್ಕಣಿ ಗ್ರಾಮ ಪಂಚಾಯತಿ, ಸಿದ್ದಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರು ಬೇಡ್ಕಣಿ ಗ್ರಾಮ ಪಂಚಾಯತಿಯಲ್ಲಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ದಿನಾಂಕ 30.12.2008 ರಂದು ಮಳಿಗೆ ನಿರ್ಮಾಣದ ಗುತ್ತಿಗೆ ಹಣದ ಚೆಕ್ಕನ್ನು ನೀಡಲು ಶ್ರೀ ಈಶ್ವರ ದೇವ ನಾಯ್ಕ, ಇವರಿಂದ ರೂ.5,000/- ಗಳ ಅಕ್ರಮ ಸಂಭಾವನೆಯನ್ನು ಪಡೆದು ಲೋಕಾಯುಕ್ತ ಟ್ರಾಪ್‌ಗೆ ಒಳಗಾಗಿರುವ ಆರೋಪವು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಮಾನ್ಯ ಉಪಲೋಕಾಯುಕ್ತರವರ ವರದಿಯಲ್ಲಿನ ಶಿಫಾರಸ್ಸಿನನ್ವಯ, ಶ್ರೀ ಬಸವರಾಜ ವೀರಪ್ಪ ಸೀಗಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬೇಡ್ಕಣಿ ಗ್ರಾಮ ಪಂಚಾಯತಿ, ಸಿದ್ದಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧ ಇವರಿಗೆ ದೊರಕುವ ಪಿಂಚಣಿಯಲ್ಲಿ ಶೇ.50 ರಷ್ಟು ಮೊತ್ತವನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

24/11/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಅಪರ ನಿಬಂಧಕರು ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಉತ್ತರ ಜಿಲ್ಲಾ ಪಂಚಾಯತಿ, ಬೆಳಗಾವಿ.
6) ಕಾರ್ಯನಿರ್ವಾಹಕ ಅಧಿಕಾರಿ, ಸಿದ್ದಾಪುರ ತಾಲ್ಲೂಕು ಪಂಚಾಯತಿ, ಸಿದ್ದಾಪುರ, ಉತ್ತರ ಕನ್ನಡ ಜಿಲ್ಲೆ.
7) ಶ್ರೀ ಬಸವರಾಜ ವೀರಪ್ಪ ಸೀಗಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬೇಡ್ಕಣಿ ಗ್ರಾಮ ಪಂಚಾಯತಿ, ಸಿದ್ದಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.
8) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.